

ಕೊಕ್ಕೊ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿನಿಯರು

## ಕ್ರೀಡೆ ಬಾಂಧವ್ಯ ಬೆಸೆಯುವ ವೇದಿಕೆ: ಅಭಿಮತ

# ಅಂತರ್ ವಿ.ವಿ ಪಂದ್ಯಾವಳಿಗೆ ಚಾಲನೆ

ಪ್ರಜಾವಾಣಿ ವಾರ್ತೆ

ಆನೇಕಲ್: ಪಟ್ಟಣಕ್ಕೆ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ದಕ್ಷಿಣ ವಲಯ ಅಂತರ್ ವಿಶ್ವವಿದ್ಯಾಲಯಗಳ ನಾಲ್ಕು ದಿನಗಳ ಪಂದ್ಯಾವಳಿಗೆ ಸೋಮವಾರ ಚಾಲನೆ ಸಿಕ್ಕಿದೆ. ಮೊದಲ ದಿನದ ಪಂದ್ಯಾವಳಿಗಳಲ್ಲಿ 59 ತಂಡಗಳು ಪಾಲ್ಗೊಂಡಿದ್ದವು.

ಮೊದಲ ದಿನವಾದ ಸೋಮವಾರ ಮಹಿಳಾ ಕೊಕ್ಕೊ ಪಂದ್ಯಾವಳಿಗೆ ಚಾಲನೆ ನೀಡಿದ ರಾಷ್ಟ್ರೀಯ ಕ್ರೀಡಾಪಟು ಶೋಭಾ ನಾರಾಯಣ್ ಮಾತನಾಡಿ, 'ಗ್ರಾಮೀಣ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಪಂದ್ಯಾವಳಿಗಳು ಪ್ರಮುಖ ಪಾತ್ರ ವಹಿಸುತ್ತವೆ. ಅಂತರ್ ವಿಶ್ವವಿದ್ಯಾಲಯಗಳ ಕೊಕ್ಕೊ ಪಂದ್ಯಾವಳಿಯಿಂದ ವಿದ್ಯಾರ್ಥಿಗಳ ನಡುವೆ ಉತ್ತಮ ಬಾಂಧವ್ಯ ಮತ್ತು ಕ್ರೀಡಾ ಮನೋಭಾವನೆ ಬೆಳೆಯಲು ಅನುಕೂಲವಾಗಿದೆ. ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಸಂಬಂಧಗಳನ್ನು ಬೆಸೆಯುವ ವೇದಿಕೆಯಾಗಿವೆ' ಎಂದು ಅಭಿಪ್ರಾಯಪಟ್ಟರು.

ಬೆಂಗಳೂರು ವಿಶ್ವವಿದ್ಯಾಲಯದ ಪ್ರೊ. ಸುಂದರ್ ರಾಜ್ ಅರಸ್ ಮಾತನಾಡಿ, ಮಹಿಳಾ ಕೊಕ್ಕೊ ಪಂದ್ಯಾವಳಿಯ ಮೂಲಕ ಮಹಿಳಾ ಸಬಲೀಕರಣಕ್ಕೆ ಪ್ರೋತ್ಸಾಹ ನೀಡಲಾಗಿದೆ. ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳು ತಯಾರಾಗಲು ಈ ಪಂದ್ಯಾವಳಿಗಳು ಉಪಯುಕ್ತವಾಗಿವೆ. ಈ ಮೂಲಕ ಕ್ರೀಡಾ ಕ್ಷೇತ್ರಕ್ಕೆ ಕೊಡುಗೆ ನೀಡಿದಂತಾಗಿದೆ ಎಂದರು.



ಆನೇಕಲ್ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ದಕ್ಷಿಣ ವಲಯ ಅಂತರ್ ವಿಶ್ವವಿದ್ಯಾಲಯಗಳ ಮಹಿಳಾ ಕೊಕ್ಕೊ ಪಂದ್ಯಾವಳಿಯನ್ನು ರಾಷ್ಟೀಯ ಕ್ರೀಡಾಪಟು ಶೋಭಾ ನಾರಾಯಣ್ ಉದ್ಘಾಟಿಸಿದರು

ಅಲಯನ್ಸ್ ವಿಶ್ವವಿದ್ಯಾಲಯದ ಸಹ ಕುಲಪತಿ ಅಭಯ್ ಚೆಬ್ಬಿ ಮಾತನಾಡಿ, ದಕ್ಷಿಣ ಭಾರತ ಅಂತರ್ ವಿಶ್ವವಿದ್ಯಾಲಯದ ಕೊಕ್ಕೊ ಪಂದ್ಯಾವಳಿಯಲ್ಲಿ ದಕ್ಷಿಣ ಭಾರತದ ಆರು ರಾಜ್ಯಗಳ 72 ವಿಶ್ವವಿದ್ಯಾಲಯಗಳು ಪಾಲ್ಗೊಳ್ಳುತ್ತಿದ್ದು, ಒಂದು ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ತಮ್ಮ ಪ್ರತಿಭೆ ಪ್ರದರ್ಶಿಸುವ ಕ್ರೀಡಾ ಹಬ್ಬವಾಗಿದೆ ಎಂದರು.

ವಿಶ್ವವಿದ್ಯಾಲಯದ ಸಹ ಉಪ ಕುಲಪತಿ ಡಾ. ಪುನೀತ್ ಕರಿಯಪ್ಪ, ಆಡಳಿತ ಮಂಡಳಿಯ ಶೈಲಾ ಚೆಬ್ಬಿ, ಸುರೇಖಾ ಶೆಟ್ಟಿ ಇದ್ದರು.